ಜಿ.ಟಿ.ಸಂಖ್ಯೆ. 823 /2021

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಾರ್ಯಾಲಯ,
(ಆಡಳಿತ ವಿಭಾಗ) ತುಮಕೂರು. ದಿನಾಂಕ: 16/2/2021

# ಸೂಚನೆ

ತುಮಕೂರು ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಈ ಕೆಳಕಂಡ ಹುದ್ದೆಗಳಿಗೆ ಈ ಕಚೇರಿಯ ಅಧಿಸೂಚನೆ ಸಂಖ್ಯೆ. ಆಡಳಿತ–1–44/2020, ದಿನಾಂಕ: 4/3/2020ರಂತೆ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಕೋವಿಡ್–19ರ ಕಾರಣದಿಂದಾಗಿ ಹಾಗೂ ಮಾನ್ಯ ಉಚ್ಚನ್ಯಾಯಾಲಯದ ನಿರ್ದೇಶನದನುಸಾರ ನೇಮಕಾತಿಯ ಎಲ್ಲಾ ಪ್ರಕ್ರಿಯೆಗಳನ್ನು ತಾತ್ಕಾಲಿಕವಾಗಿ ತಡೆಹಿಡಿಯಲಾಗಿತ್ತು.

ಮುಂದುವರೆದು, ಪ್ರಸ್ತುತ ಮಾನ್ಯ ಉಚ್ಚನ್ಯಾಯಾಲಯದ ನಿರ್ದೇಶನದನ್ವಯ ನೇಮಕಾತಿಯ ಪ್ರಕ್ರಿಯೆಯನ್ನು ಆರಂಭಿಸಲಾಗಿರುತ್ತದೆ. ಈ ಕಚೇರಿಯ ಅಧಿಸೂಚನೆ ಸಂಖ್ಯೆ. ಆಡಳಿತ–1–44/2020, ದಿನಾಂಕ: 4/3/2020ಕ್ಕೆ ಸಂಬಂಧಿಸಿದಂತೆ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ಪ್ರಾರಂಭದ ಹಾಗೂ ಕೊನೆಯ ದಿನಾಂಕವನ್ನು ಈ ಕೆಳಕಂಡಂತೆ ಮರುನಿಗದಿಪಡಿಸಲಾಗಿದೆ.

| ಕ್ರ. ಸಂ. | ಹುದ್ದೆಗಳ ವಿವರ | ಹುದ್ದೆಗಳ ಸಂಖ್ಯೆ | ಅರ್ಜಿಯನ್ನು ಸಲ್ಲಿಸಲು ಹೊಸದಾಗಿ ನಿಗದಿಪಡಿಸಲಾದ ಆರಂಭದ ದಿನಾಂಕ | ಅರ್ಜಿಯನ್ನು ಸಲ್ಲಿಸಲು ಹೊಸದಾಗಿ ನಿಗದಿಪಡಿಸಲಾದ ಕೊನೆಯ ದಿನಾಂಕ | ಎಸ್.ಬಿ.ಐ. ಕಲೆಕ್ಟ್ ಮೂಲಕ ಶುಲ್ಕ ಪಾವತಿಸಲು ಕೊನೆಯ ದಿನಾಂಕ |
|---|---|---|---|---|---|
| 1 | ಬೆರಳಚ್ಚುಗಾರರು | 07 | 23/2/2021 | 24/3/2021 | 26/3/2021 |
| 2 | ಬೆರಳಚ್ಚು–ನಕಲುಗಾರರು | 03 | | | |
| 3 | ಜಾರಿಪೇದೆ | 11 | | | |

ಅರ್ಜಿ ಸಲ್ಲಿಸಲು ಪ್ರಾರಂಭ ಹಾಗೂ ಕೊನೆಯ ದಿನಾಂಕಗಳನ್ನು ಮರುನಿಗದಿಪಡಿಸಲಾಗಿದ್ದರೂ ಸಹ ಸದರಿ ದಿನಾಂಕಗಳು ಅರ್ಜಿ ಸಲ್ಲಿಸಲು ಮಾತ್ರ ಅನ್ವಯವಾಗಲಿದ್ದು, ವಯೋಮಿತಿ ನಿರ್ಣಯ, ವಿದ್ಯಾರ್ಹತೆ ಹಾಗೂ ಇನ್ನಿತರ ಎಲ್ಲಾ ವಿಷಯಗಳಿಗೂ **ಹಿಂದಿನ ದಿನಾಂಕಗಳೇ ಅನ್ವಯವಾಗಲಿದೆ.**

ಈಗಾಗಲೇ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಮತ್ತೊಮ್ಮೆ ಅರ್ಜಿಯನ್ನು ಸಲ್ಲಿಸುವ ಅವಶ್ಯಕತೆಯಿರುವುದಿಲ್ಲ. ಮೊದಲು ಸಲ್ಲಿಸಿರುವ ಅರ್ಜಿಗಳು ಹಾಗೂ ಶುಲ್ಕವನ್ನೇ ಪರಿಗಣಿಸಲಾಗುತ್ತದೆ.

ಅರ್ಜಿ ಸಲ್ಲಿಸಲು ಪ್ರಾರಂಭದ ಹಾಗೂ ಕೊನೆಯ ದಿನಾಂಕಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಅಂಶಗಳು ಈಗಾಗಲೇ ಹೊರಡಿಸಲಾಗಿರುವ ನೇಮಕಾತಿ ಅಧಿಸೂಚನೆಯಲ್ಲಿರುವಂತೆ ಅನ್ವಯವಾಗಲಿವೆ.

–ಸಹಿ/–
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ತುಮಕೂರು

# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಚೇರಿ, ತುಮಕೂರು

## ಅಧಿಸೂಚನೆ ಸಂಖ್ಯೆ ADM-I- 44/2020, ದಿನಾಂಕ 4/3/2020

**ವಿಷಯ: ಬೆರಳಚ್ಚುಗಾರ, ಬೆರಳಚ್ಚು–ನಕಲುಗಾರ** ಹಾಗೂ **ಜಾರಿಪೇದೆ** ಹುದ್ದೆಗಳ ನೇಮಕಾತಿ ಕುರಿತು.

~~~

## ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ 18/4/2020

ಈ ಘಟಕದ ವಿವಿಧ ನ್ಯಾಯಾಲಯಗಳಲ್ಲಿ ಖಾಲಿ ಇರುವ **ಬೆರಳಚ್ಚುಗಾರ, ಬೆರಳಚ್ಚು–ನಕಲುಗಾರ ಹಾಗೂ ಜಾರಿಪೇದೆ** ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ **ಆನ್‌ಲೈನ್ ಮೂಲಕ** ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಗಳನ್ನು ತುಮಕೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/tumakuru ನಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ **ದಿನಾಂಕ 19/3/2020 ರಿಂದ 18/4/2020ರ ರಾತ್ರಿ 11.59 ರವರೆಗೆ** ಮಾತ್ರ ಸಲ್ಲಿಸತಕ್ಕದ್ದು.

ಆನ್‌ಲೈನ್ ಹೊರತುಪಡಿಸಿ, ಖುದ್ದಾಗಿ, ಅಂಚೆ ಮೂಲಕ ಅಥವಾ ಇನ್ಯಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಬೆರಳಚ್ಚುಗಾರ ಹುದ್ದೆ:**

- ಹುದ್ದೆಗಳ ಸಂಖ್ಯೆ: **07**
- ವೇತನ ಶ್ರೇಣಿ: 21400-500-22400-550-24600-600-27000-650-29600-750-32600-850-36000-950-39800-1100-42000 ಮತ್ತು ಇತರೆ ಭತ್ಯೆಗಳು.
- ಹುದ್ದೆಗಳ ವರ್ಗೀಕರಣ:

| **ವರ್ಗೀಕರಣ** | **ಇತರೆ** | **ಮಹಿಳೆ** | **ಮಾಜಿ ಸೈನಿಕ** | **ಅಂಗವಿಕಲ** | **ಒಟ್ಟು** |
|---|---|---|---|---|---|
| ಪರಿಶಿಷ್ಟ ಜಾತಿ | | 1 | | | 1 |
| ಪ್ರವರ್ಗ–2ಬಿ (ಬ್ಯಾಕ್‌ಲಾಗ್) | | | | 1* (ದೃಷ್ಠಿ ಮಾಂದ್ಯ) | 1 |
| ಪ್ರವರ್ಗ–3ಎ | | 1 | | | 1 |
| ಪ್ರವರ್ಗ–3ಬಿ | | 1 | | | 1 |
| ಸಾಮಾನ್ಯ ಅಭ್ಯರ್ಥಿ | 1 | 1 | 1 | | 3 |
| **ಒಟ್ಟು** | **1** | **4** | **1** | **1** | **7** |

* ಬ್ಯಾಕ್ ಲಾಕ್ ಹುದ್ದೆ
~~~

ಮೇಲ್ಕಂಡ ಅಂಗವಿಕಲ ವರ್ಗೀಕರಣಗಳಡಿಯಲ್ಲಿ ಖಾಲಿ ಇದ್ದ ಹುದ್ದೆಯು ಈ ಹಿಂದಿನ ಅಧಿಸೂಚನೆಗಳಲ್ಲಿ ತುಂಬದೆ ಹಾಗೇ ಉಳಿದಿರುವ ಹುದ್ದೆಯಾಗಿರುತ್ತದೆ. ಈ ಅಧಿಸೂಚನೆಯಲ್ಲಿ ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಲಭ್ಯವಿಲ್ಲದೇ ಇದ್ದಲ್ಲಿ, ನೇರ ಮೀಸಲಾತಿಯಡಿ ಬರುವ ಆಯಾ ಪ್ರವರ್ಗದ ಇತರೆ ಅಂಗವಿಕಲತೆಯುಳ್ಳ ಅರ್ಹ ವಿಕಲಚೇತನ ಅಭ್ಯರ್ಥಿಯಿಂದ ಭರ್ತಿ ಮಾಡಲಾಗುವುದು.

**ಬೆರಳಚ್ಚುಗಾರ ಹುದ್ದೆಗೆ ಶೈಕ್ಷಣಿಕ ವಿದ್ಯಾರ್ಹತೆ:**

- ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.
- ಕನ್ನಡ ಮತ್ತು ಆಂಗ್ಲ ಪ್ರೌಢ ದರ್ಜೆಯ ಬೆರಳಚ್ಚು ಪರೀಕ್ಷೆಯಲ್ಲಿ (Kannada & English Senior Typing) ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

**ಬೆರಳಚ್ಚು-ನಕಲುಗಾರ ಹುದ್ದೆ:**

- ಹುದ್ದೆಗಳ ಸಂಖ್ಯೆ: **03**
- ವೇತನ ಶ್ರೇಣಿ: 21400-500-22400-550-24600-600-27000-650-29600-750-32600-850-36000-950-39800-1100-42000 ಮತ್ತು ಇತರೆ ಭತ್ಯೆಗಳು.
- ಹುದ್ದೆಗಳ ವರ್ಗೀಕರಣ:

| **ವರ್ಗೀಕರಣ** | **ಗ್ರಾಮೀಣ** | ಅಂಗವಿಕಲ | ಒಟ್ಟು |
|---|---|---|---|
| ಪರಿಶಿಷ್ಟ ಜಾತಿ | – | 1 (ದೃ.ಮಾ) | 1 |
| ಪ್ರವರ್ಗ-1 | – | 1 (ದೃ.ಮಾ) | 1 |
| ಸಾಮಾನ್ಯ ಅಭ್ಯರ್ಥಿ | 1 | – | 1 |
| **ಒಟ್ಟು** | **1** | **2** | **3** |

ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಯಾವುದೇ ಮುನ್ಸೂಚನೆಯಿಲ್ಲದೆ ಬದಲಾವಣೆಗೆ ಒಳಪಡಬಹುದು.

**ಬೆರಳಚ್ಚು-ನಕಲುಗಾರ ಹುದ್ದೆಗೆ ಶೈಕ್ಷಣಿಕ ವಿದ್ಯಾರ್ಹತೆ:**

- ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.
- ಕನ್ನಡ ಮತ್ತು ಇಂಗ್ಲೀಷ್ ಕಿರಿಯಶ್ರೇಣಿ ಬೆರಳಚ್ಚು ಪರೀಕ್ಷೆಯಲ್ಲಿ (Kannada & English Junior Typing) ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

**ಬೆರಳಚ್ಚುಗಾರ ಮತ್ತು ಬೆರಳಚ್ಚುನಕಲುಗಾರ ಹುದ್ದೆಯ ಆಯ್ಕೆ ವಿಧಾನ :**

ಅ) ಈ ಕೆಳಕಂಡ ನಿಯಮಗಳನ್ವಯ ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು

1. ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರ ಹುದ್ದೆಗಳು) (ನೇಮಕಾತಿ) ನಿಯಮಗಳು, 1982.
2. ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2007.

ಆ) ಆಯ್ಕೆಗೆ ಅರ್ಹತಾ ಪರೀಕ್ಷೆ ಮತ್ತು ಸಂದರ್ಶನವನ್ನು ಈ ಕೆಳಕಂಡಂತೆ ನಡೆಸಲಾಗುವುದು.

3. ನೇಮಕಾತಿ ಪ್ರಾಧಿಕಾರದಿಂದ ನೇಮಿಸಲಾದ ಪರೀಕ್ಷಕರು 15 ನಿಮಿಷಗಳ ಕನ್ನಡ ಮತ್ತು ಇಂಗ್ಲೀಷ್ ಉಕ್ತಲೇಖನವನ್ನು ನೀಡುವರು, ಅದನ್ನು ಅಭ್ಯರ್ಥಿಗಳು ವಿಶೇಷ ತಂತ್ರಾಂಶದ ಗಣಕಯಂತ್ರದಲ್ಲಿ ಬೆರಳಚ್ಚು ಮಾಡತಕ್ಕದ್ದು. ಬೆರಳಚ್ಚುಯಂತ್ರದ ಕೀಲಿಮಣೆಯನ್ನು ಹೋಲುವ ತಂತ್ರಾಂಶವನ್ನು ಗಣಕಯಂತ್ರಗಳಿಗೆ ಅಳವಡಿಸಲಾಗುವುದು.
4. ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಹೊಂದಿದ್ದು, ಉತ್ತೀರ್ಣರಾಗಲು ಕನಿಷ್ಠ 50 ಅಂಕಗಳನ್ನು ನಿಗದಿಪಡಿಸಲಾಗಿರುತ್ತದೆ.
5. ನಿಗದಿಪಡಿಸಲಾದ ವಿದ್ಯಾರ್ಹತೆಯ ಪರೀಕ್ಷೆಗಳಲ್ಲಿನ ಮತ್ತು ಅರ್ಹತಾ ಪರೀಕ್ಷೆಗಳ ಒಟ್ಟು ಅಂಕಗಳ ಶೇಕಡಾವಾರು ಮೊತ್ತದ ಆಧಾರದ ಮೇಲೆ 1 ಹುದ್ದೆಗೆ 5 ಅಭ್ಯರ್ಥಿಗಳಂತೆ (1:5ರ ಅನುಪಾತದಲ್ಲಿ) ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಅಧಿಸೂಚನೆಯಲ್ಲಿ ಪ್ರಕಟಿಸಲಾದ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಅರ್ಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.
6. ಸಂದರ್ಶನವು 5 ಅಂಕಗಳನ್ನು ಒಳಗೊಂಡಿರುತ್ತದೆ.

**ಜಾರಿಪೇದೆ ಹುದ್ದೆ:**

- ಹುದ್ದೆಗಳ ಸಂಖ್ಯೆ: **11**
- ವೇತನ ಶ್ರೇಣಿ: 19950-450-20400-500-22400-550-24600-600-27000-650-29600-750-32600-850-36000-950-37900 ಮತ್ತು ಇತರೆ ಭತ್ಯೆಗಳು.
- ಹುದ್ದೆಗಳ ವರ್ಗೀಕರಣ:

| ವರ್ಗೀಕರಣ | ಮಹಿಳೆ | ಗ್ರಾಮೀಣ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ಒಟ್ಟು |
|---|---|---|---|---|---|
| ಪರಿಶಿಷ್ಟ ಜಾತಿ | | | | 1 | **1** |
| ಪ್ರವರ್ಗ 1 | 1 | | | | **1** |
| ಪ್ರವರ್ಗ 2 ಎ | | 1 | | 1 | **2** |
| ಪ್ರವರ್ಗ 2 ಬಿ | 1 | | | | **1** |
| ಸಾಮಾನ್ಯ ಅರ್ಹತೆ | 2 | 2 | 1 | 1 | **6** |
| **ಒಟ್ಟು** | **4** | **3** | **1** | **3** | **11** |

ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಯಾವುದೇ ಮುನ್ಸೂಚನೆಯಿಲ್ಲದೆ ಬದಲಾವಣೆಗೆ ಒಳಪಡಬಹುದು.

- ಶೈಕ್ಷಣಿಕ ವಿದ್ಯಾರ್ಹತೆ:
  - ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು ಹಾಗೂ ಕನ್ನಡ ಓದಲು ಮತ್ತು ಬರೆಯಲು ಬರಬೇಕು.
  - ವಾಹನ ಚಾಲನಾ ಪರವಾನಗಿ ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

- ಆಯ್ಕೆ ವಿಧಾನ:

ಅ) ಈ ಕೆಳಕಂಡ ನಿಯಮಗಳನ್ವಯ ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು

- ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರ ಹುದ್ದೆಗಳು) (ನೇಮಕಾತಿ) ನಿಯಮಗಳು, 1982.

- ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2007.

ಆ) ಆಯ್ಕೆಗೆ ಸಂದರ್ಶನವನ್ನು ಈ ಕೆಳಕಂಡಂತೆ ನಡೆಸಲಾಗುವುದು.

- ನಿಗದಿಪಡಿಸಲಾದ ವಿದ್ಯಾರ್ಹತೆಯ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ 1 ಹುದ್ದೆಗೆ 25 ಅಭ್ಯರ್ಥಿಗಳಂತೆ (1:25ರ ಅನುಪಾತದಲ್ಲಿ) ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಅಧಿಸೂಚನೆಯಲ್ಲಿ ಪ್ರಕಟಿಸಲಾದ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ ಅರ್ಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.
- ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು
- ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.

**ಮೇಲಿನ ಎಲ್ಲಾ ಹುದ್ದೆಗಳಿಗೆ ವಯೋಮಿತಿ :**

(ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಅನುಗುಣವಾಗಿ):

| | | | |
|---|---|---|---|
| ಕನಿಷ್ಠ ವಯೋಮಿತಿ | 18 ವರ್ಷ | | |
| ಗರಿಷ್ಠ ವಯೋಮಿತಿ | ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ | : | 35 ವರ್ಷ |
| | ಪ್ರವರ್ಗ–2ಎ/2ಬಿ/3ಎ/3ಬಿ | : | 38 ವರ್ಷ |
| | ಪ.ಜಾ, ಪ.ಪಂ & ಪ್ರವರ್ಗ–1 | : | 40 ವರ್ಷ |

ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಹಾಗೂ ಅಂಗವಿಕಲರಿಗೆ ಕರ್ನಾಟಕ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ಅನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

**ಪರಿವೀಕ್ಷಣಾ ಅವಧಿ:**

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ.

**ಮೇಲಿನ ಹುದ್ದೆಗಳಿಗೆ ನಿಗದಿತ ಅರ್ಜಿ ಶುಲ್ಕ – ಹಾಗೂ ಪಾವತಿ ವಿಧಾನ :**

| | |
|---|---|
| ಪ್ರವರ್ಗ–2ಎ, 2ಬಿ, 3ಎ, 3ಬಿ ಮತ್ತು ಸಾಮಾನ್ಯ ಅಭ್ಯರ್ಥಿಗಳಿಗೆ | ರೂ. 200 |
| ಪ.ಜಾ, ಪ.ಪಂ, ಪ್ರವರ್ಗ 1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ರೂ. 100 |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/tumakuru ನಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ State Bank Collect ಮೂಲಕ Online payment through net banking / credit card / debit card / challan download ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಲು ಇಚ್ಛಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ print out ಅನ್ನು ಪಡೆದುಕೊಂಡು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ Demond Draft, Postal Order,

Money Order ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ನಿಗದಿತ ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಗಳು ಒಂದು ವೇಳೆ ಅರ್ಜಿ ಸಂಖ್ಯೆಯನ್ನು ತಪ್ಪಾಗಿ/ಹೊಂದಿಕೆಯಾಗದಂತೆ ನಮೂದಿಸಿದ್ದಲ್ಲಿ ಅಥವಾ ಯಾವುದೇ ಕಾರಣಕ್ಕಾಗಿ ಶುಲ್ಕ ಪಾವತಿಯಾಗದಿದ್ದಲ್ಲಿ ನೇಮಕಾತಿ ಪ್ರಾಧಿಕಾರವು ಹೊಣೆಯಾಗಿರುವುದಿಲ್ಲ ಮತ್ತು ಈ ಕುರಿತು ಯಾವುದೇ ಸಂವಹನಕ್ಕೆ ಅವಕಾಶವಿರುವುದಿಲ್ಲ.

ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

* ಅಭ್ಯರ್ಥಿಗಳು ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳುವುದು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದಿರುವ ಹಾಗೂ ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

* ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಮಿಂಚಂಚೆ (e-mail id) ಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ sms ಅಥವಾ e-mail ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರ ಹೊಣೆಯಾಗಿರುವುದಿಲ್ಲ.

* ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಜನ್ಮದಿನಾಂಕ, ವಿದ್ಯಾರ್ಹತೆ, ಮೀಸಲಾತಿ ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಅನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

* ಅಭ್ಯರ್ಥಿಗಳು ತಮ್ಮ ಭಾವಚಿತ್ರ ಮತ್ತು ಸಹಿಯನ್ನು scan ಮಾಡಿ upload ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

* ಬಣ್ಣದ ಭಾವಚಿತ್ರವು ಇತ್ತೀಚಿನದಾಗಿದ್ದು ಅಳತೆಯಲ್ಲಿ 5cm ಉದ್ದ X 3.6cm ಅಗಲ ಉಳ್ಳದ್ದಾಗಿರಬೇಕು ಮತ್ತು 50kb ಅಳತೆಯದ್ದಾಗಿರಬೇಕು ಹಾಗೂ ಅದು jpg ನಮೂನೆಯಲ್ಲಿರಬೇಕು. ಬಿಳಿ ಬಣ್ಣದ ಪರದೆಯ ಹಿನ್ನೆಲೆಯಿರುವ ಭಾವಚಿತ್ರವಾಗಿರಬೇಕು. (White background screen)

* ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು. (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

* ಅಭ್ಯರ್ಥಿಯು ಕಪ್ಪು ಬಾಲ್ ಪಾಯಿಂಟ್ ಪೆನ್ನಿನಲ್ಲಿ ಬಿಳಿಯ ಹಾಳೆಯ ಮೇಲೆ ಸಹಿ ಮಾಡಿ ಅಪ್‌ಲೋಡ್ ಮಾಡಬೇಕು. (2.5cm ಉದ್ದ X 7.5cm ಅಗಲ ಉಳ್ಳದ್ದಾಗಿರಬೇಕು ಮತ್ತು 26kb ಅಳತೆಯದ್ದಾಗಿರಬೇಕು ಹಾಗೂ ಅದು jpg ನಮೂನೆಯಲ್ಲಿರಬೇಕು.

* ತದನಂತರ ಅಭ್ಯರ್ಥಿಯು ಆನ್‌ಲೈನ್ ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ/ ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

* ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಯನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲೂ ಹಿಂದಿರುಗಿಸಲಾಗುವುದಿಲ್ಲ ಹಾಗೂ ಯಾವುದೇ ಇತರೆ ನೇಮಕಾತಿಗೂ ಹೊಂದಾಣಿಕೆ ಮಾಡಿಕೊಳ್ಳುವುದಿಲ್ಲ.

* ಈ ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸಲು **ದಿನಾಂಕ 18/4/2020ರ ರಾತ್ರಿ 11.59** ರವರೆಗೆ ಅವಕಾಶವಿರುತ್ತದೆ ಮತ್ತು ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು **ದಿನಾಂಕ 21/4/2020** ಕಡೆಯ ದಿನಾಂಕವಾಗಿದ್ದು, ಅದರೊಳಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.

* ಅರ್ಹತಾ ಪರೀಕ್ಷೆಯ ವೇಳಾಪಟ್ಟಿ ಹಾಗೂ ಸಂದರ್ಶನದ ವೇಳಾ ಪಟ್ಟಿಯನ್ನು ಈ ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/tumakuruನಲ್ಲಿ ಪ್ರಕಟಿಸಲಾಗುವುದು. ಅರ್ಹತಾ ಪರೀಕ್ಷೆಗೆ ಮತ್ತು ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಅರ್ಹತಾ ಪರೀಕ್ಷೆಗೆ ಮತ್ತು ಸಂದರ್ಶನಕ್ಕೆ ಪ್ರವೇಶ ಪತ್ರಗಳನ್ನು ಅಭ್ಯರ್ಥಿಗಳಿಗೆ ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ (voter id/ aadhar card/ driving license/ pan card) ಅರ್ಹತಾ ಪರೀಕ್ಷೆಗೆ/ಸಂದರ್ಶನಕ್ಕೆ ಹಾಜರಾಗುವುದು.

10. ಇತರೆ ಸೂಚನೆಗಳು:

ಅ) ಅಭ್ಯರ್ಥಿಗಳು ಅರ್ಹತಾ ಪರೀಕ್ಷೆ/ ಸಂದರ್ಶನ/ ದಾಖಲೆ ಪರಿಶೀಲನೆ ಸಮಯದಲ್ಲಿ ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು.

* ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ
* ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ರಶೀದಿ ಪ್ರತಿ
* ಎಸ್.ಎಸ್.ಎಲ್.ಸಿ ಅಂಕಪಟ್ಟಿ
* ಬೆರಳಚ್ಚುಗಾರ ಹುದ್ದೆಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಹಿರಿಯ ಶ್ರೇಣಿ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆಗಳ ಅಂಕಪಟ್ಟಿಗಳು
* ಬೆರಳಚ್ಚು ನಕಲುಗಾರ ಹುದ್ದೆಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಕಿರಿಯ ಶ್ರೇಣಿ ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪರೀಕ್ಷೆಗಳ ಅಂಕಪಟ್ಟಿಗಳು.

* ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು **'ನಮೂನೆ-ಡಿ'** ಯಲ್ಲಿ, ಪ್ರವರ್ಗ 1ರ ಅಭ್ಯರ್ಥಿಗಳು **"ನಮೂನೆ ಇ"** ಯಲ್ಲಿ ಮತ್ತು ಪ್ರವರ್ಗ-2ಬಿ, 2ಎ, 3ಎ ಮತ್ತು 3ಬಿಗೆ ಸೇರಿದ ಅಭ್ಯರ್ಥಿಗಳು **'ನಮೂನೆ-ಎಫ್'** ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪಡೆದ ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳು.

* ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ/96/ಸೇನನಿ/2005, ದಿನಾಂಕ 10/8/2005ರ ಪ್ರಕಾರ ನಿಗದಿತ ನಮೂನೆ-2 ರಲ್ಲಿ ಅಧಿಕಾರಿಗಳಿಂದ ಪಡೆದು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುಸಹಿಯನ್ನು ಕಡ್ಡಾಯವಾಗಿ ಮಾಡಿಸಿ ಸಲ್ಲಿಸಬೇಕು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

* ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ರ ಜೊತೆ ನಮೂನೆ-1ರ ದೃಢೀಕೃತ ಪತ್ರವನ್ನು ಹೊಂದಿರಬೇಕು.

* ಮಾಜಿ ಸೈನಿಕ ಮೀಸಲಾತಿ ಕೋರುವ ಅಭ್ಯರ್ಥಿಗಳು ಮಿಲಿಟರಿ ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣ ಪತ್ರವನ್ನು ಹೊಂದಿರಬೇಕು.

* ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ದಿನಾಂಕ 19/11/2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ ಸಿಆಸುಇ/115/ಸೇನನಿ/2005 ರಲ್ಲಿ ನಿಗದಿಪಡಿಸಿರುವ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. (ಇತರೆ ನಮೂನೆಯ ಪ್ರಮಾಣ ಪತ್ರ/ ಗುರುತಿನ ಚೀಟಿಗಳನ್ನು ಪರಿಗಣಿಸುವುದಿಲ್ಲ).

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



* ವಿಧವೆಯರು, ಜೀತ ಕಾರ್ಮಿಕರು ಮತ್ತು ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

* ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸುವ ಸಮಯಕ್ಕೆ ಮೊದಲೇ ಸಂಬಂಧಪಟ್ಟ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದಿರಬೇಕು.

* ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳೊಳಗಿನ ಇಬ್ಬರು ಗಣ್ಯ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣ ಪತ್ರ (ಗಣ್ಯ ವ್ಯಕ್ತಿಗಳ ಮೊಹರು ಮತ್ತು ಸಹಿ ಕಡ್ಡಾಯವಾಗಿರಬೇಕು).

* ಅಭ್ಯರ್ಥಿಯು ಶಾಲಾ ನಡತೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಪಡೆದಿರಬೇಕು.

ಆ) ಮೇಲ್ಕಂಡ ದಾಖಲೆಗಳು ನಿಗದಿತ ನಮೂನೆಗಳಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಮೊದಲು ಪಡೆದ ದಾಖಲೆಗಳಾಗಿರಬೇಕು ಹಾಗೂ ಸದರಿ ದಾಖಲೆಗಳ ಮೂಲ ದಾಖಲೆಗಳನ್ನು ಪರಿಶೀಲನೆ ಸಮಯದಲ್ಲಿ ಹಾಜರುಪಡಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

ಇ) ಅರ್ಹತಾ ಪರೀಕ್ಷೆಗೆ/ ಸಂದರ್ಶನಕ್ಕೆ/ ದಾಖಲೆ ಪರಿಶೀಲನೆಗೆ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗಬೇಕು.

ಈ) ನೇಮಕಾತಿ ಸಂಬಂಧವಾಗಿ ಅಭ್ಯರ್ಥಿಗಳು ಈ ಕಚೇರಿಯೊಂದಿಗೆ ಯಾವುದೇ ದೂರವಾಣಿ/ ಪತ್ರ ವ್ಯವಹಾರ ನಡೆಸಲು ಆಸ್ಪದವಿರುವುದಿಲ್ಲ.

ಉ) ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವುದು, ಖೋಟಾ ದಸ್ತಾವೇಜು, ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವುದು, ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವುದು, ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವುದು, ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವುದು ಅಥವಾ ಅನುಸರಿಸಲು ಪ್ರಯತ್ನಿಸಿರುವುದು, ನೇಮಕಾತಿ ಸಂದರ್ಭದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡುಬಂದಲ್ಲಿ ಅವರ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದಲ್ಲದೇ ಅಭ್ಯರ್ಥಿಯನ್ನು ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು.

**–ಸಹಿ/–**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ತುಮಕೂರು

**PR-25**